# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು - 572 103
ದೂರವಾಣಿ : 0816-2254546 0816-2255596, 0816-2255597 ಫ್ಯಾಕ್ಸ್ : 0816-2270719

ಸಂಖ್ಯೆ: ತುವಿ : ಶೈವಿ :2017-18:3497 ದಿನಾಂಕ 23.01.2018

## ಅಧಿಸೂಚನೆ

ವಿಷಯ: ಸ್ನಾತಕ ಶಿಕ್ಷಣ ಪದವಿಯ 2017-18 ನೇ ಸಾಲಿನ ಶೈಕ್ಷಣಿಕ ವೇಳಾಪಟ್ಟಿ

ಉಲ್ಲೇಖ: 1. ಶೈಕ್ಷಣಿಕ ವೇಳಾಪಟ್ಟಿ ಸಮಿತಿಯ ಸಭೆಯ ನಡಾವಳಿಗಳ ದಿನಾಂಕ: 28.12.2017
2. ಮಾನ್ಯ ಕುಲಪತಿಗಳ ಅನುಮೋದನೆ (ಕಂಡಿಕೆ – 42 ) ದಿನಾಂಕ :22.01.2018

* * *

ಸ್ನಾತಕ ಶಿಕ್ಷಣ ಪದವಿಯ 2017-18 ನೇ ಸಾಲಿನ ಶೈಕ್ಷಣಿಕ ವೇಳಾಪಟ್ಟಿಯು ಈ ಕೆಳಕಂಡಂತಿದೆ.

| ಕ್ರಮ ಸಂಖ್ಯೆ | ಶೈಕ್ಷಣಿಕ ವೇಳಾಪಟ್ಟಿ | ಪ್ರಥಮ ಸೆಮಿಸ್ಟರ್ | ತೃತೀಯ ಸೆಮಿಸ್ಟರ್ |
|---|---|---|---|
| 1 | ಕಾಲೇಜಿನ ಮತ್ತು ತರಗತಿಗಳ ಪ್ರಾರಂಭ ದಿನಾಂಕ | 12.03.2018 | 12.03.2018 |
| 2 | ಪ್ರವೇಶಾತಿ ಕೊನೆಯ ದಿನಾಂಕ | 28.03.2018 | --- |
| 3 | ದಂಡ ಶುಲ್ಕ ರೂ 1000/-ದೊಂದಿಗೆ ಪ್ರವೇಶಾತಿ ಕೊನೆಯ ದಿನಾಂಕ | 07.04.2018 | --- |
| 4 | ಪ್ರವೇಶಾತಿ ತಃಖ್ತೆಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಬೇಕಾದ ಕೊನೆಯ ದಿನಾಂಕ | 16.04.2018 | 16.04.2018 |
| 5 | ಶೈಕ್ಷಣಿಕ ಮತ್ತು ಮೌಲ್ಯಾಂಕನ ಉಸ್ತುವಾರಿ ಸಮಿತಿಯ (MAAC) ಭೇಟಿಯ ಅವಧಿ | 10.07.2018 ರಿಂದ 20.07.2018 | 10.07.2018 ರಿಂದ 20.07.2018 |
| 6 | ಕಾಲೇಜಿನ ತರಗತಿಗಳ ಅಂತಿಮ ದಿನಾಂಕ | 21.07.2018 | 21.07.2018 |
| 7 | ಪರೀಕ್ಷೆಗಳ ಪ್ರಾರಂಭದ ದಿನಾಂಕ | 01.08.2018 | 01.08.2018 |

| ಕ್ರಮ ಸಂಖ್ಯೆ | ಶೈಕ್ಷಣಿಕ ವೇಳಾಪಟ್ಟಿ | ದ್ವಿತೀಯ ಸೆಮಿಸ್ಟರ್ | ಚತುರ್ಥ ಸೆಮಿಸ್ಟರ್ |
|---|---|---|---|
| 1 | ಕಾಲೇಜಿನ ಮತ್ತು ತರಗತಿಗಳ ಪುನರಾರಂಭ ದಿನಾಂಕ | 03.09.2018 | 03.09.2018 |
| 2 | ಶೈಕ್ಷಣಿಕ ಮತ್ತು ಮೌಲ್ಯಾಂಕನ ಉಸ್ತುವಾರಿ ಸಮಿತಿಯ (MAAC) ಭೇಟಿಯ ಅವಧಿ | 07.01.2019 ರಿಂದ 17.01.2019 | 07.01.2019 ರಿಂದ 17.01.2019 |
| 3 | ಕಾಲೇಜಿನ ತರಗತಿಗಳ ಅಂತಿಮ ದಿನಾಂಕ | 19.01.2019 | 19.01.2019 |
| 4 | ಪರೀಕ್ಷೆಗಳ ಪ್ರಾರಂಭದ ದಿನಾಂಕ | 28.01.2019 | 28.01.2019 |
| 5 | 2018-19ನೇ ಶೈಕ್ಷಣಿಕ ಸಾಲಿನ ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ನ ತರಗತಿಗಳ ಪ್ರಾರಂಭದ ದಿನಾಂಕ | 11.03.2019 | 11.03.2019 |

## ಸೂಚನೆ

1. ವಿಶ್ವವಿದ್ಯಾನಿಲಯದಿಂದ ಸಂಯೋಜನೆ ಪಡೆಯದ ಕೋರ್ಸು ವಿಷಯಗಳಿಗೆ ಮತ್ತು ವಿಶ್ವವಿದ್ಯಾನಿಲಯದಿಂದ ಪಠ್ಯಕ್ರಮ ಮತ್ತು ವಿನಿಯಮ ಅನುಮೋದನೆಗೊಳ್ಳದ ಕೋರ್ಸುಗಳಿಗೆ ಪ್ರವೇಶಾನುಮೋದನೆ ಮಾಡಲಾಗುವುದಿಲ್ಲ.

2. ವಿದ್ಯಾರ್ಥಿಗಳ ಪ್ರವೇಶಾತಿಯು NCTE, ಮಾನದಂಡಗಳಿಗೆ ಹಾಗೂ ವಿಶ್ವವಿದ್ಯಾನಿಲಯ ಕಾಲಕಾಲಕ್ಕೆ ಹೊರಡಿಸುವ ನಿಯಮಗಳಿಗನುಗುಣವಾಗಿ ನಡೆದಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳುವುದು ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರು ಅಥವಾ ಸಂಸ್ಥೆಯ ಮುಖ್ಯಸ್ಥರ ಪೂರ್ಣ ಜವಾಬ್ದಾರಿಯಾಗಿರುತ್ತದೆ ಈ ನಿಯಮಗಳಿಗೆ ವಿರುದ್ಧವಾಗಿ ಆಗಿರುವ ಪ್ರವೇಶಾತಿಯು ಅಮಾನ್ಯವಾಗುತ್ತದೆ.

3. ಹೊರ ರಾಜ್ಯದ ವಿದ್ಯಾರ್ಥಿಗಳು ನಿಗದಿತ ನಮೂನೆಯಲ್ಲಿ ಅರ್ಹತಾ ಪ್ರಮಾಣ ಪತ್ರವನ್ನು ತೆಗೆದುಕೊಳ್ಳತಕ್ಕದು ಜೊತೆಯಲ್ಲಿ ಅಂಕಪಟ್ಟಿಗಳು ಇತರ ದಾಖಲಾತಿಗಳನ್ನು ನಿಗದಿಗೊಳಿಸಿದ ಶುಲ್ಕದೊಂದಿಗೆ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸತಕ್ಕದ್ದು. ಅರ್ಹತಾ ಪ್ರಮಾಣ ಪತ್ರ ಇಲ್ಲದ ವಿದ್ಯಾರ್ಥಿಗಳಿಗೆ ಪ್ರವೇಶಾತಿಯನ್ನು ನೀಡತಕ್ಕದ್ದಲ್ಲ ಹೊರ ದೇಶಗಳ ವಿದ್ಯಾರ್ಥಿಗಳು ಪ್ರವೇಶಾತಿಗಾಗಿ ಕೆಳಕಂಡ ದಾಖಲಾತಿಗಳನ್ನು ಸಲ್ಲಿಸತಕ್ಕದ್ದು.
   a. ಅರ್ಹತಾ ಪ್ರಮಾಣ ಪತ್ರ
   b. ವಿದ್ಯಾರ್ಥಿ ವೀಸಾ
   c. ಸಕ್ಷಮ ಪ್ರಾಧಿಕಾರದಿಂದ ನೀಡಿರುವ AIDS ಮುಕ್ತ ಪ್ರಮಾಣ ಪತ್ರ

4. a) ಅನ್ಯ ವಿಶ್ವವಿದ್ಯಾನಿಲಯಗಳಲ್ಲಿ ಪದವಿ ಮುಗಿಸಿರುವ ವಿದ್ಯಾರ್ಥಿಗಳು ಪ್ರವೇಶಾತಿಯ ಸಂದರ್ಭದಲ್ಲಿ ವಲಸೆ ಪ್ರಮಾಣ ಪತ್ರವನ್ನು ನೀಡಬೇಕು.

   b) ಯಾವುದೇ ವಿದ್ಯಾರ್ಥಿಯು ಮೂರು ವರ್ಷದ ಪದವಿ ಅಥವಾ ಎರಡು ವರ್ಷದ ಸ್ನಾತಕೋತ್ತರ ಪದವಿಯನ್ನು ವಿಶ್ವವಿದ್ಯಾನಿಲಯ/ಸ್ವಾಯತ್ತ ಕಾಲೇಜಿನಿಂದ ನಿಯಮಾವಳಿಯ ಪ್ರಕಾರ ನಿಗದಿತ ಕನಿಷ್ಠ ಅಂಕಗಳನ್ನು ಪಡೆಯದೇ ಹೋದರೆ ಬಿ.ಇಡಿ ಕೋರ್ಸಿಗೆ ಪ್ರವೇಶಾತಿ ನೀಡುವಂತಿಲ್ಲ.

5. ಯಾವುದೇ ಪ್ರವೇಶಾತಿಯನ್ನು ವಿಶ್ವವಿದ್ಯಾನಿಲಯ/ NCTE/ಕರ್ನಾಟಕ ಸರ್ಕಾರ ನಿಗದಿಪಡಿಸಿರುವ ಅನುಮೋದಿತ ಸೀಟುಗಳಿಗಿಂತ ಹೆಚ್ಚಾಗಿ ನೀಡುವ ಹಾಗಿಲ್ಲ ಅಂತಹ ಪ್ರವೇಶಾತಿಯು KSU Act 2000 section 59(18) ರ ಪ್ರಕಾರ ಅಮಾನ್ಯವಾಗುತ್ತದೆ.

6. ವಿದ್ಯಾರ್ಥಿಯ ಕನಿಷ್ಠ ಹಾಜರಾತಿ, ಪರೀಕ್ಷಾ ಪ್ರಶ್ನೆ ಪತ್ರಿಕೆ ಅದರ ಸ್ವರೂಪ ಮುಂತಾದವುಗಳನ್ನೊಳಗೊಂಡಂತೆ ಸದರಿ ಕೋರ್ಸಿಗೆ ಸಂಬಂಧಿಸಿದಂತೆ ವಿನಿಯಮಗಳನ್ನು ವಿದ್ಯಾರ್ಥಿಯ ಗಮನಕ್ಕೆ ತರುವುದು. ಪ್ರತೀ ವರ್ಷದ ಪ್ರಾರಂಭದಲ್ಲಿ ವಿದ್ಯಾರ್ಥಿಯ ದಾಖಲಾತಿಯ ವಿವರವನ್ನು ವಿಶ್ವವಿದ್ಯಾನಿಲಯಕ್ಕೆ ನಿಗದಿತ ದಿನದೊಳಗೆ ಸಲ್ಲಿಸುವುದು.

7. ವಿಶ್ವವಿದ್ಯಾನಿಲಯದಿಂದ ಪೂರ್ವಾನುಮತಿ ಪಡೆಯದೇ ಯಾವುದೇ ವಿದ್ಯಾರ್ಥಿಯ ವರ್ಗಾವಣೆಯ ಅಡಿಯಲ್ಲಿ ಮಾಡುವ ಹಾಗಿಲ್ಲ.

8. ವಿದ್ಯಾರ್ಥಿಯ ಪ್ರವೇಶಾತಿಯನ್ನು ಕಾಲೇಜಿನವರು ವಿಶ್ವವಿದ್ಯಾನಿಲಯವು ನಿಗದಿಪಡಿಸಿರುವ ಪ್ರಸಕ್ತ ಶೈಕ್ಷಣಿಕ ವರ್ಷದ ದಿನಾಂಕದೊಳಗಾಗಿ ಪ್ರವೇಶಾತಿಯನ್ನು ನೀಡಬೇಕು ಯಾವುದೇ ಪ್ರವೇಶಾತಿಯನ್ನು ವಿಶ್ವವಿದ್ಯಾನಿಲಯವು ನಿಗದಿಪಡಿಸಿರುವ ಕೊನೆಯ ದಿನಾಂಕದ ನಂತರ ನೀಡುವ ಹಾಗಿಲ್ಲ ಅಂತಹ ಪ್ರವೇಶಾತಿಯು ಅಮಾನ್ಯವಾಗುತ್ತದೆ.

9. ಶೈಕ್ಷಣಿಕ ವೇಳಾಪಟ್ಟಿಯನ್ನು ಎಲ್ಲಾ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳ ಗಮನಕ್ಕೆ ತರುವುದು.

10. ಶೈಕ್ಷಣಿಕ ವೇಳಾಪಟ್ಟಿಯ ಮೇಲಿನ ಯಾವುದೇ ದಿನಾಂಕದಲ್ಲಿ ರಜೆ ಬಂದ ಪಕ್ಷದಲ್ಲಿ ಅದರ ಮರುದಿನ ಕರ್ತವ್ಯದ ದಿನವೆಂದು ಭಾವಿಸತಕ್ಕದ್ದು

(ಕರಡು ಮಾನ್ಯ ಕುಲಸಚಿವರಿಂದ ಅನುಮೋದಿಸಲ್ಪಟ್ಟಿದೆ)

ಆದೇಶದ ಮೇರೆಗೆ

ಉಪಕುಲಸಚಿವರು (ಶೈಕ್ಷಣಿಕ ವಿಭಾಗ)

ಗೆ

ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವ್ಯಾಪ್ತಿಯಲ್ಲಿನ ಎಲ್ಲಾ ಸ್ನಾತಕ ಶಿಕ್ಷಣ ಪದವಿ ಕಾಲೇಜುಗಳು,
ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.

ಪ್ರತಿ:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಡಾ. ಬಿ.ಆರ್. ಅಂಬೇಡ್ಕರ್ ವೀಥಿ, ಬೆಂಗಳೂರು – 560 001
2) ಕುಲಸಚಿವರು(ಮೌ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3) ಕುಲಸಚಿವರು, ಮೈಸೂರು/ಬೆಂಗಳೂರು/ಕರ್ನಾಟಕ/ಕುವೆಂಪು/ಮಂಗಳೂರು/ದಾವಣಗೆರೆ/ಕರ್ನಾಟಕ ಮಹಿಳಾ ವಿಶ್ವವಿದ್ಯಾನಿಲಯಗಳು
4) ಡೀನರು, ಕಲಾ, ವಿಜ್ಞಾನ ವಾಣಿಜ್ಯ ಮತ್ತು ಶಿಕ್ಷಣ ನಿಕಾಯ ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
5) ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
6) ಗ್ರಂಥಪಾಲಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
7) ಎಲ್ಲಾ ವಿಭಾಗಗಳ ಉಪಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
8) ಎನ್.ಎಸ್.ಎಸ್ ಸಂಯೋಜಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
9) ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
10) ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
11) ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
12) ಕಚೇರಿ ಪ್ರತಿ.